# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ: ಕೇಂದ್ರ ಕಛೇರಿ:ಬೆಂಗಳೂರು

## ಪತ್ರಿಕಾ ಪ್ರಕಟಣೆ

71ನೇ ಸ್ವಾತಂತ್ರೋತ್ಸವವನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು. ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಎಸ್.ಆರ್ ಉಮಾಶಂಕರ್, ಭಾ.ಆ.ಸೇ ರವರು ಧ್ವಜಾರೋಹಣ ನೆರವೇರಿಸಿದರು.

ನಿಗಮದ ಕೇಂದ್ರ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿ ಮತ್ತು ಅಧಿಕಾರಿಗಳು ಹಾಗೂ ಅವರ ಮಕ್ಕಳಿಗಾಗಿ ಸ್ವಾತಂತ್ರೋತ್ಸವದ ಅಂಗವಾಗಿ ಆಯೋಜಿಸಿದ್ದ ಕ್ರೀಡೆ (ಕೇರಂ, ಚೆಸ್, ಟೇಬಲ್ ಟೆನ್ನಿಸ್, ಷಟಲ್ ಬ್ಯಾಡ್ಮಿಂಟನ್) ಮತ್ತು ಸಾಂಸ್ಕೃತಿಕ ಸ್ಪರ್ಧೆ (ರಂಗೋಲಿ, ಮೆಮೊರಿ ಟೆಸ್ಟ್, ಸಂಗೀತ ಕುರ್ಚಿ, ಸೂಪರ್ ಮಿನಿಟ್) ಗಳಲ್ಲಿ ವಿಜೇತರಾದವರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕರು ಬಹುಮಾನಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ನಿಗಮದ ಮಾನ್ಯ ಉಪಾಧ್ಯಕ್ಷರಾದ ಶ್ರೀ. ಬಸವರಾಜ ಬುಳ್ಳಾ, ಶ್ರೀ.ಎಸ್.ರವಿ ಭಾಪೋಸೇ, ನಿರ್ದೇಶಕರು (ಸಿಬ್ಬಂದಿ ಮತ್ತು ಪರಿಸರ), ಮಂಡಳಿ ಸದಸ್ಯರಾದ ಶ್ರೀ.ಕೃಷ್ಣಮೂರ್ತಿ ಮತ್ತು ನಿಗಮದ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

**ಸಹಿ/–**
**ಸಾರ್ವಜನಿಕ ಸಂಪರ್ಕಾಧಿಕಾರಿ**